**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.11/2024**

| | | | |
|---|---|---|---|
| ಸಾಕ್ಷಿದಾರರ ಹೆಸರು | ನೀಲಪ್ಪ ಕೊಪ್ಪದ | ಸಿಡಬ್ಲ್ಯೂ | 4 |
| ತಂದೆಯ ಹೆಸರು | ಫಕ್ಕೀರಪ್ಪ | ಪಿಡಬ್ಲ್ಯೂ | 4 |
| ವಯಸ್ಸು | 58 ವರ್ಷ | | |
| ಉದ್ಯೋಗ | ಕೃಷಿ | | |
| ವಾಸಸ್ಥಳ | ಮರಡೂರ | | |

ದಿಃ **06.08.2025** ರಂದು ಸಾಕ್ಷಿದಾರರನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಪ್ರಭಾರ ಹಿ.ಸ.ಸ.ಅಭಿಯೋಜಕರಿಂದ.

**1).** ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಅದರಲ್ಲಿರುವ ಸಹಿ ತನ್ನದೇ ಎಂದು ಒಪ್ಪಿದ್ದರಿಂದ ಸದರಿ ದಾಖಲಾತಿಯು ಜಪ್ತು ಪಂಚನಾಮೆಯಾಗಿದ್ದು, ಅದನ್ನು ನಿ.ಪಿ-7 ಎಂದು ಈಗಾಗಲೇ ಗುರುತಿಸಲ್ಪಟ್ಟಿರುತ್ತದೆ. ಸಾಕ್ಷಿಯ ಸಹಿಯನ್ನು ನಿ.ಪಿ-7(ಬಿ) ಎಂದು ಗುರುತಿಸಲಾಯಿತು. ಅಲ್ಲದೇ ಸದರಿ ಜಪ್ತು ಪಂಚನಾಮೆ ಮಾಡುವಾಗ ಪೊಲೀಸರು ಮೂರು ಫೋಟೋಗಳನ್ನು ತೆಗೆದಿದ್ದು ಅವುಗಳನ್ನು ನಿ.ಪಿ-8 ರಿಂದ ನಿ.ಪಿ-10 ಎಂದು ಗುರುತಿಸಲಾಯಿತು. ಈಗ ಒಂದು ವರ್ಷದ ಹಿಂದೆ ಸದರಿ ಜಪ್ತು ಪಂಚನಾಮೆಗೆ ಗುತ್ತಲ ಪೊಲೀಸ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿ.ಪಿ-7 ಪಂಚನಾಮೆಯಲ್ಲಿ ಬರೆದಿರುವ ಸಂಗತಿಗಳು ಗೊತ್ತಿರುವದಿಲ್ಲ. ಫೋಟೋಗಳನ್ನು ಯಾವ ಕಾರಣಕ್ಕಾಗಿ ತೆಗೆದಿದ್ದಾರೆ ಎಂದು ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದರಿಂದ, ಪರಿಶೀಲಿಸಿ ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಪ್ರಭಾರ ಹಿ.ಸ.ಸ.ಅಭಿಯೋಜಕರಿಂದ.</u>

**2)** ದಿನಾಂಕಃ 12.07.2023 ರಂದು ಮಧ್ಯಾಹ್ನ 2-00 ಘಂಟೆಯಿಂದ 3-00 ಘಂಟೆಯ ಮಧ್ಯದಲ್ಲಿ ನನ್ನ ಮತ್ತು ಚಾ.ಸಾ-4 ಇವರ ಸಮಕ್ಷಮ ಅಪಘಾತಕ್ಕೊಳಗಾದ ಎರಡು ಮೋಟಾರ ಸೈಕಲಗಳನ್ನು ಗುತ್ತಲ ಪೊಲೀಸ ಠಾಣೆಯಲ್ಲಿ ಜಪುತ ಪಡಿಸಿಕೊಳ್ಳುವಾಗ ನನ್ನ ಹಾಗೂ ಚಾ.ಸಾ-5 ಇಬ್ಬರ ಸಹಿ ಪಡೆದಿರುತ್ತಾರೆ ಅಂದರೆ ಸರಿಯಲ್ಲ. ಆ ಸಮಯದಲ್ಲಿ ನಿ.ಪಿ-8 ರಿಂದ 10 ಪೋಟೋ ತೆಗೆದಿದ್ದಾರೆ ಅಂದರೆ ಸರಿಯಲ್ಲ. ನನಗೆ ನಿ.ಪಿ-7 ಜಪ್ತು ಪಂಚನಾಮೆಯಲ್ಲಿನ ಮಾಹಿತಿ ಇದ್ದರೂ ಕೂಡ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರವಾಗಿಃ ಪಾಟೀ ಸವಾಲು ಇರುವದಿಲ್ಲ ಎಂದು ತಿಳಿಸಿರುತ್ತಾರೆ.</u>

<u>ಮರು ವಿಚಾರಣೆ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.